ಇ) ಮುಂದಿನ ನೇಮಕಾತಿಯಲ್ಲಿ ಭರ್ತಿ ಮಾಡಲಾಗುವುದು.

ಕೊಡಗು ಜಿಲ್ಲೆಯಲ್ಲಿರುವ ತಾಂತ್ರಿಕ ಶಾಲೆಗಳ ಪ್ರಾರಂಭ

271 - ಶ್ರೀ ಅಪ್ಪಚ್ಚು ರಂಜನ್ ಎಂ.ಪಿ. (ಸೋಮವಾರಪೇಟೆ) : ಮಾನ್ಯ ಕಾರ್ಮಿಕ ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಡಗು ಜಿಲ್ಲೆಯಲ್ಲಿ ಇರುವ ತಾಂತ್ರಿಕ (ಐ.ಟಿ.ಐ) ಶಾಲೆಗಳ ಸಂಖ್ಯೆ ಎಷ್ಟು?

ಆ) ಕೊಡಗು ಜಿಲ್ಲೆ ಸೋಮವಾರಪೇಟೆ ತಾಲ್ಲೂಕಿನಲ್ಲಿ ಐ.ಟಿ.ಐ. ಶಾಲೆ ತೆರೆಯುವ ಉದ್ದೇಶವಿದೆಯೇ?

ಇ) ಹಾಗಿದ್ದಲ್ಲಿ, ಎಂದಿನಿಂದ ಈ ಶಾಲೆಯನ್ನು ತೆರೆಯಲಾಗುವುದು?

ಶ್ರೀ ಎ.ಎಂ. ಹಿಂಡಸಗೇರಿ (ಕಾರ್ಮಿಕ ಮತ್ತು ವಕ್ಫ್ ಸಚಿವರು) :

ಅ) 2

ಆ) ಇಲ್ಲ

ಇ) ಉದ್ಭವಿಸುವುದಿಲ್ಲ.

ಉತ್ತರಹಳ್ಳಿ ಕ್ಷೇತ್ರದ ಪ್ರೌಢಶಾಲೆಗಳು

272 - ಶ್ರೀ ಅಶೋಕ್ ಆರ್. (ಸೋಮವಾರಪೇಟೆ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉತ್ತರಹಳ್ಳಿ ಕ್ಷೇತ್ರದಲ್ಲಿ ಎಷ್ಟು ಪ್ರೌಢಶಾಲೆಗಳಿವೆ (ಸರ್ಕಾರಿ ಮತ್ತು ಖಾಸಗಿ) ಸರ್ಕಾರಿ ಪ್ರೌಢಶಾಲೆಗಳ ಅವಶ್ಯಕತೆಯಿದೆಯೆಂದು ಎಷ್ಟು ಅರ್ಜಿಗಳು ಬಂದಿದೆ, ಈ ಅರ್ಜಿಗಳನ್ನು ಪರಿಶೀಲಿಸಿ ಹೆಚ್ಚುವರಿ ಪ್ರೌಢಶಾಲೆಗಳನ್ನು ಯಾವಾಗ ಮಂಜೂರು ಮಾಡಲಾಗುವುದು?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ)

ಒಟ್ಟು	-	167
ಸರ್ಕಾರಿ	-	14
ಅನುದಾನಿತ	-	31
ಅನುದಾನ ರಹಿತ	-	122

ಸರ್ಕಾರಿ ಪ್ರೌಢಶಾಲೆ ಮಂಜೂರು ಮಾಡುವ ಬಗ್ಗೆ 6 ಅರ್ಜಿಗಳು ಬಂದಿವೆ. ಸರ್ಕಾರದ ನೀತಿಯಂತೆ ಹೊಸ ಪ್ರೌಢಶಾಲೆಗಳನ್ನು ಮಂಜೂರು ಮಾಡಲಾಗುತ್ತಿಲ್ಲ.